# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು, ಕಾರಡಗಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ 1) ಶ್ರೀ ಶಂಕರ ಕೋಟುಮುಚಗಿ (ಪ್ರಸ್ತುತ ಶಿರಬಡಗಿ ಗ್ರಾಮ ಪಂಚಾಯತಿ), ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾಗಿದ್ದ 2) ಶ್ರೀ ವೀರೇಶ ಆವರಿ ಮತ್ತು 3) ಶ್ರೀ ಎನ್.ಸಿ.ಪಾಟೀಲ್ (ಪ್ರಸ್ತುತ ನಿವೃತ್ತ) ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-521/2014/ARLO1, ದಿನಾಂಕ:14.03.2017
2) ಮಾನ್ಯ ಉಪಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಜಿಎಂ/1160/2015/ಸನಿಕಾಸ-1, ದಿ.13.02.2017
3) ಸಮಸಂಖ್ಯೆಯ ಅನಧಿಕೃತ ಟಿಪ್ಪಣಿ, ದಿನಾಂಕ 16.03.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 13.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಖಾಜಾ ಮೊಹಿದ್ದೀನ್ ಖದರ್‌ಗೌಸ್ ಶಾಮಣವರ, ಕಾರಡಗಿ ಗ್ರಾಮ, ಸವಣೂರ ತಾಲ್ಲೂಕು, ಹಾವೇರಿ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, ಕಾರಡಗಿ ಗ್ರಾಮ ಪಂಚಾಯತಿಯ 2010-11 ಮತ್ತು 2012-13 ನೇ ಸಾಲಿನ ಇಂದಿರಾ ಆವಾಜ್ ಯೋಜನೆ ಮತ್ತು ರಾಜೀವ್‌ಗಾಂಧಿ ವಸತಿ ಯೋಜನೆಯಲ್ಲಿ ದುರುಪಯೋಗವಾಗಿದೆ. ಸದರಿ ವಸತಿ ಯೋಜನೆಯನ್ನು ಗ್ರಾಮ ಪಂಚಾಯತಿ ಸದಸ್ಯರು ತಮ್ಮ ಸಂಬಂಧಿಗಳಿಗೆ ಮತ್ತು ಪತ್ನಿಯ ಹೆಸರಿನಲ್ಲಿ ಹಾಗೂ ಈಗಾಗಲೇ ಮನೆ ಹೊಂದಿರುವ ವ್ಯಕ್ತಿಗಳಿಗೆ ಸುಳ್ಳು ಮಾಹಿತಿ ಆಧಾರದ ಮೇಲೆ ವಸತಿ ಮಂಜೂರಾತಿ ಮಾಡಿ, ಲಕ್ಷಾಂತರ ರೂಪಾಯಿ ಹಣ ದುರುಪಯೋಗ ಮಾಡಿಕೊಂಡಿದ್ದಾರೆ. ಅಲ್ಲದೆ, ಸದರಿ ವಸತಿ ಯೋಜನೆ ಅಡಿ ಫಲಾನುಭವಿಗಳ ಆಯ್ಕೆ ಮಾಡುವ ಸಂಧರ್ಭದಲ್ಲಿ ಒಂದು ಹೆಸರನ್ನು ಎರಡು ಬಾರಿ ಆಯ್ಕೆ ಮಾಡಿ, ಕರ್ತವ್ಯ ಲೋಪ ಎಸಗಿರುವುದಾಗಿ ದೂರು ಸಲ್ಲಿಸಿದ್ದು, ಈ ದೂರಿನ ಬಗ್ಗೆ ತನಿಖೆ ಕೈಗೊಂಡು ಹಾವೇರಿ ಜಿಲ್ಲಾ ಕರ್ನಾಟಕ ಲೋಕಾಯುಕ್ತ ಆರಕ್ಷಕ ಉಪಾಧೀಕ್ಷಕರವರು ವರದಿ ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳು, ಎದುರುದಾರರ ಆಕ್ಷೇಪಣೆಗಳು, ಕಡತ ಹಾಗೂ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಎದುರುದಾರರಾದ ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು, ಕಾರಡಗಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ 1) ಶ್ರೀ ಶಂಕರ ಕೋಟುಮುಚಗಿ (ಪ್ರಸ್ತುತ ಶಿರಬಡಗಿ ಗ್ರಾಮ ಪಂಚಾಯತಿ), ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾಗಿದ್ದ 2) ಶ್ರೀ ವೀರೇಶ ಆವರಿ ಮತ್ತು 3) ಶ್ರೀ ಎನ್.ಸಿ.ಪಾಟೀಲ್ (ಪ್ರಸ್ತುತ ನಿವೃತ್ತ) ಇವರುಗಳ ವಿರುದ್ಧದ ನಡವಳಿಗಳನ್ನು ಕೈಬಿಡಲು ಸೂಕ್ತ, ಸಮಂಜಸ, ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬಂದಿದ್ದು, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವೆ(ನಡತೆ) ನಿಯಮ 1966 ರ ನಿಯಮಗಳು 3(1) ರನ್ವಯ ಇಲಾಖಾ ಶಿಸ್ತು ಕ್ರಮ ಜರುಗಿಸಲು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರಡಿ ಪ್ರದತ್ತವಾದ ಅಧಿಕಾರದಡಿ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಲಾಗುತ್ತಿದ್ದು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14(ಎ) ರಡಿ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ, ತಾಲ್ಲೂಕು ವಸತಿ ಯೋಜನೆಯ ಪಂಚಾಯತಿಯ ನೋಡಲ್ ಅಧಿಕಾರಿಯಾದ ಶ್ರೀ ಶಿಪ್ಪೇಶಿ ಬಡ್ಡಿ ಇವರ ವಿರುದ್ಧ ಕ್ರಮ ಜರುಗಿಸಲು ವಸತಿ ಇಲಾಖೆಗೆ ಮೇಲೆ ಓದಲಾದ (3) ರಲ್ಲಿ ನಿರ್ದೇಶನ ನೀಡಲಾಗಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರಾದ ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು, ಕಾರಡಗಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ 1) ಶ್ರೀ ಶಂಕರ ಕೋಟುಮುಚಗಿ (ಪ್ರಸ್ತುತ ಶಿರಬಡಗಿ ಗ್ರಾಮ ಪಂಚಾಯತಿ), ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿದ್ದ 2) ಶ್ರೀ ವೀರೇಶ ಆವರಿ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಹಾಗೂ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿದ್ದ 3) ಶ್ರೀ ಎನ್.ಸಿ.ಪಾಟೀಲ್ (ಪ್ರಸ್ತುತ ನಿವೃತ್ತ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳುಗಳು 1957 ರ ನಿಯಮ 214(2)(ಬಿ)(i) ರಡಿ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 237 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 31.03.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು, ಕಾರಡಗಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿದ್ದ ಶ್ರೀ ಎನ್.ಸಿ.ಪಾಟೀಲ್ (ಪ್ರಸ್ತುತ ನಿವೃತ್ತ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳುಗಳು 1957 ರ ನಿಯಮ 214(2)(ಬಿ)(i) ರಡಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ಮಂಜೂರಾತಿ ನೀಡಿರುವುದರಿಂದ, ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು, ಕಾರಡಗಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ 1) ಶ್ರೀ ಶಂಕರ ಕೋಟುಮುಚಗಿ (ಪ್ರಸ್ತುತ ಶಿರಬಡಗಿ ಗ್ರಾಮ ಪಂಚಾಯತಿ), ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾಗಿದ್ದ 2) ಶ್ರೀ ವೀರೇಶ ಆವರಿ ಮತ್ತು 3) ಶ್ರೀ ಎನ್.ಸಿ.ಪಾಟೀಲ್ (ಪ್ರಸ್ತುತ ನಿವೃತ್ತ) ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಾವಳುಗಳು 1957 ರ ನಿಯಮ 214 ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ–1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5) ಕಾರ್ಯನಿರ್ವಾಹಕ ಅಧಿಕಾರಿ, ಸವಣೂರ ತಾಲ್ಲೂಕು ಪಂಚಾಯತಿ, ಸವಣೂರ, ಹಾವೇರಿ ಜಿಲ್ಲೆ.
6) ಹಾವೇರಿ ಜಿಲ್ಲೆ, ಸವಣೂರು ತಾಲ್ಲೂಕು, ಕಾರಡಗಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ 1) ಶ್ರೀ ಶಂಕರ ಕೋಟುಮುಚಗಿ (ಪ್ರಸ್ತುತ ಶಿರಬಡಗಿ ಗ್ರಾಮ ಪಂಚಾಯತಿ), ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾಗಿದ್ದ 2) ಶ್ರೀ ವೀರೇಶ ಆವರಿ ಮತ್ತು 3) ಶ್ರೀ ಎನ್.ಸಿ.ಪಾಟೀಲ್ (ಪ್ರಸ್ತುತ ನಿವೃತ್ತ) (ಕಾರ್ಯನಿರ್ವಾಹಕ ಅಧಿಕಾರಿ, ಸವಣೂರ ತಾಲ್ಲೂಕು ಪಂಚಾಯತಿ , ಸವಣೂರ ಇವರ ಮುಖಾಂತರ)
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.